## ಕರ್ನಾಟಕ ಸರ್ಕಾರದ ನಡುವಳಿಗಳು

**ವಿಷಯ:** ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಗೆ ಅಗತ್ಯವಿರುವ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕಿನ ಜಮೀನುಗಳ ಭೂಸ್ವಾಧೀನ ಪ್ರಕ್ರಿಯೆ ಕಾರ್ಯವನ್ನು ಕೈಗೊಳ್ಳಲು ವಿಶೇಷ ಭೂಸ್ವಾಧೀನಾಧಿಕಾರಿ ಬೆಂಗಳೂರು ಇವರಿಗೆ ವಹಿಸುವ ಬಗ್ಗೆ.

**ಓದಲಾಗಿದೆ:**

ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಪತ್ರ ಸಂಖ್ಯೆ: ಎಲ್‌ಎಕ್ಯೂ/ಸಿಆರ್/02/16-17, ದಿನಾಂಕ: 03.03.2017.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ, ದಿನಾಂಕ: 14.03.2015 ರಂದು ನಡೆದ ಉನ್ನತ ಮಟ್ಟದ ಸಮನ್ವಯ ಸಮಿತಿಯ ಸಭೆಯ ನಡವಳಿಯಲ್ಲಿ ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಯಲ್ಲಿ ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನ ವ್ಯಾಪ್ತಿಯ ಬೈರಗೊಂಡಲು ಜಲಾಶಯ ನಿರ್ಮಾಣವಾಗುತ್ತಿದ್ದು, ಈ ಜಲಾಶಯದ ಏರಿ ಮತ್ತು ಮುಳುಗಡೆ ಪ್ರದೇಶದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ತಾಲ್ಲೂಕು, ಸಾಸಲು ಹೋಬಳಿಯ 11 ಗ್ರಾಮಗಳ ಒಟ್ಟು 1083.86 ಹೆಕ್ಟೇರ್ (2678 ಎಕರೆ 24-08 ಗುಂಟೆ) ಜಮೀನು ಬರುತ್ತಿದ್ದು, ಇದರಲ್ಲಿ ಈ ಜಲಾಶಯದ ಏರಿ ನಿರ್ಮಾಣಕ್ಕೆ ಸಾಸಲು ಹೋಬಳಿಯ ಮಚ್ಚನಹಳ್ಳಿ ಗ್ರಾಮದಲ್ಲಿ 47.87 ಹೆಕ್ಟೇರ್ (118 ಎಕರೆ 25-16 ಗುಂಟೆ) ಜಮೀನುಗಳು ಒಳಪಡುತ್ತವೆ. ಈ ಜಮೀನುಗಳ ಭೂಸ್ವಾಧೀನ ಪ್ರಕ್ರಿಯೆಯನ್ನು ಇನ್ನೂ ಪ್ರಾರಂಭಿಸದೇ ಇರುವ ಕಾರಣ ಈ ಭಾಗದಲ್ಲಿ ಯೋಜನೆ ಕಾರ್ಯ ಪ್ರಾರಂಭಿಸಲು ಸಾಧ್ಯವಾಗಿಲ್ಲವೆಂದು, ಇದಕ್ಕೆ ಕಾರಣ ಭೂಸ್ವಾಧೀನಾಧಿಕಾರಿಗಳು ನೇಮಕವಾಗಿಲ್ಲದಿರುವುದು. ಆದ್ದರಿಂದ, ಭೂಸ್ವಾಧೀನಕ್ಕೆ ಸಂಬಂಧಿಸಿದ ಯಾವುದೇ ಪ್ರಕ್ರಿಯೆಗಳನ್ನು ಪ್ರಾರಂಭಿಸಿರುವುದಿಲ್ಲವಾದ್ದರಿಂದ ಉಪವಿಭಾಗಾಧಿಕಾರಿ, ದೊಡ್ಡಬಳ್ಳಾಪುರ ಉಪವಿಭಾಗ ಇವರನ್ನು ಯೋಜನೆಗೆ ಸಂಬಂಧಿಸಿದಂತೆ, ಎಸ್.ಐ.ಎ ಕಾರ್ಯಕೈಗೊಳ್ಳಲು ವಿಶೇಷ ಭೂಸ್ವಾಧೀನಾಧಿಕಾರಿಯನ್ನಾಗಿ ನೇಮಕಗೊಳಿಸಿ, ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆ ನಡೆಸುವ ಕಾರ್ಯವನ್ನು ದೊಡ್ಡ ಬಳ್ಳಾಪುರದ ಉಪ ವಿಭಾಗಾಧಿಕಾರಿಗಳಿಗೆ ವಹಿಸುವಂತೆ ಸೂಚಿಸಲಾಗಿದೆ.

ವಿಷಯವನ್ನು ಪರಿಶೀಲಿಸಿ ಸರ್ಕಾರವು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ಉಪ ವಿಭಾಗದ ಕಾರ್ಯ ಒತ್ತಡ ಇರುವುದನ್ನು ಮನಗೊಂಡು ಎತ್ತಿನಹೊಳೆ ಕುಡಿಯುವ ನೀರಿನ

ಯೋಜನೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆಯನ್ನು ವಿಶೇಷ ಭೂಸ್ವಾಧೀನಾಧಿಕಾರಿಗಳು, ಬೆಂಗಳೂರು ಇವರಿಗೆ ವಹಿಸಲು ನಿರ್ಧರಿಸಿ, ಅದರಂತೆ ಈ ಕೆಳಕಂಡಂತೆ ಆದೇಶಿಸುತ್ತದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ 39 ಭೂಸ್ವಾಬೆ 2017, ಬೆಂಗಳೂರು, ದಿನಾಂಕ: 25.03.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಗೆ ಅಗತ್ಯವಿರುವ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಮೀನುಗಳ ಭೂಸ್ವಾಧೀನ ಪ್ರಕ್ರಿಯೆಯ ಎಲ್ಲಾ ಕಾರ್ಯಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ವಿಶೇಷ ಭೂಸ್ವಾಧೀನಾಧಿಕಾರಿ, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು ಇವರಿಗೆ ಹೆಚ್ಚುವರಿಯಾಗಿ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಎಸ್.ಉದಯ ಕುಮಾರ್) 25/03/17
ಸರ್ಕಾರದ ಉಪ ಕಾರ್ಯದರ್ಶಿ
ಕಂದಾಯ ಇಲಾಖೆ(ಭೂಸ್ವಾಧೀನ)

ಇವರಿಗೆ:

1) ಮಹಾಲೇಖಪಾಲರು(ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2) ಅಧ್ಯಕ್ಷರು, ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಯ ಸಮನ್ವಯ ಸಮಿತಿ ಹಾಗೂ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
3) ರಾಜ್ಯ ಆಯುಕ್ತರು, ಪುನರ್ವಸತಿ ಮತ್ತು ಪುನರ್ ನಿರ್ಮಾಣ ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ.
4) ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ಬೆಂಗಳೂರು ನಗರ ಜಿಲ್ಲೆ.
5) ವ್ಯವಸ್ಥಾಪಕ ನಿರ್ದೇಶಕರು, ವಿ.ಜೆ.ಎನ್.ಎಲ್ .ಬೆಂಗಳೂರು
6) ವಿಶೇಷ ಭೂಸ್ವಾಧೀನಾಧಿಕರಿಗಳು, ಬೆಂಗಳೂರು ಜಿಲ್ಲೆ, ಪೋಡಿಯಂ ಬ್ಲಾಕ್, ವಿ.ವಿ ಗೋಪುರ, ಬೆಂಗಳೂರು.
7) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಕಂದಾಯ ಇಲಾಖೆ, ಬೆಂಗಳೂರು.
8) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9) ಶಾಖಾರಕ್ಷ ತಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:-

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.